**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 239 ಗ್ರಾಪಂಅ 2014

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 19.03.2014

**ಇವರಿಂದ:**

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,

**ಇವರಿಗೆ:**

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ
ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು,
ಮತ್ತು ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು.

ಮಾನ್ಯರೆ,

**ವಿಷಯ:** ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ 9, 11ಎ ಮತ್ತು 11ಬಿ ಗಳನ್ನು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಡಿಜಿಟಲ್ ಸಹಿ ಮೂಲಕ ವಿತರಿಸುವ ಬಗ್ಗೆ. – ತರಬೇತಿ ಆಯೋಜಿಸಿರುವ ಕುರಿತು.

*****

ಗ್ರಾಮೀಣಾಭಿವರದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಬೆಂಗಳೂರು ಸ್ಯಾಟ್‌ಕಾಂ ಉಪಕೇಂದ್ರದ ಕಾರ್ಯಕ್ರಮಗಳಿಗೆ ಚಾಲನೆ, ಆ ನಂತರ ಗ್ರಾಮ ಪಂಚಾಯತಿ ಹಂತದಲ್ಲಿ ಸರ್ಕಾರದ ಅಧಿಸೂಚನೆ ಸುತ್ತೋಲೆಗಳ ಮುಖಾಂತರ ಮಾರ್ಗಸೂಚಿಗಳನ್ನು ನೀಡಿ ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿನ ಸ್ಥಿರಾಸ್ತಿಗಳಿಗೆ ಸಂಬಂಧಿಸಿದಂತೆ ನಮೂನೆ-9, 11ಎ ಮತ್ತು 11ಬಿ ಗಳನ್ನು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಡಿಜಿಟಲ್ ಸಹಿ ಮೂಲಕ ವಿತರಿಸುತ್ತಿದ್ದು ಸದರಿ ನಮೂನೆಗಳನ್ನು ವಿತರಿಸುವಾಗ ಉದ್ಭವಿಸುವ ಸಮಸ್ಯೆಗಳು ಹಾಗೂ ತಾಂತ್ರಿಕ ಸಮಸ್ಯೆಗಳ ಬಗ್ಗೆ ಎನ್.ಐ.ಸಿ ಅಧಿಕಾರಿಗಳು ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳು ತರಬೇತಿಯನ್ನು ನೀಡುವರು.

ಆದುದರಿಂದ ತಮ್ಮ ಜಿಲ್ಲೆಯ ಮತ್ತು ತಾಲ್ಲೂಕಿನ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತಿಯ ದರ್ಜೆ ಲೆಕ್ಕ ಸಹಾಯಕರು, ತಪ್ಪದೆ ತಮ್ಮ ತಾಲ್ಲೂಕಿನ ಸಾಮರ್ಥ್ಯ ಸೌಧದಲ್ಲಿ ದಿನಾಂಕ: 21.03.2014ರಂದು ಬೆಳಿಗ್ಗೆ 10.30 ಘಂಟೆಗೆ ಸರಿಯಾಗಿ ಹಾಜರಿರಲು ಸೂಚಿಸಲು ಕ್ರಮ ಕೈಗೊಳ್ಳುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

(ಲಕ್ಕಶೆಟ್ಟಿ)
ಪೀಠಾಧಿಕಾರಿ(ಗ್ರಾಮ ಪಂಚಾಯತಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಯನ್ನು ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ:

1. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು.
2. ಹಿರಿಯ ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ.. ಬೆಂಗಳೂರು.